**ಪಿ. ಡಬ್ಲ್ಯೂಃ 1**

**(ಸಾಕ್ಷಿಗೆ ಪ್ರಮಾಣವಚನ ಭೋದಿಸಲಾಯಿತು , ತಾಃ 27-09-2024)**

**ಮುಖ್ಯ ವಿಚಾರಣೆ : ವಾದಿ ಪರ ಶ್ರೀ ಜೆ ಡಿ ಬಿ ವಕೀಲರಿಂದ,**

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಸಾಕ್ಷಿ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಾನು ಓದಿ ನೋಡಿ ಸಹಿ ಮಾಡಿರುತ್ತೇನೆ. ಅದರಲ್ಲಿ ಬರೆದ ಎಲ್ಲಾ ವಿಷಯಗಳು ನಿಜ ಇರುತ್ತವೆ .

ದಾವಾ ಆಸ್ತಿಗಳಿಗೆ ಸಂಬಂಧಿಸಿದಂತೆ ಎರಡು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1 ಮತ್ತು 2 ಎಂದು, ದಾವಾ ಆಸ್ತಿಯಲ್ಲಿರುವ ಮನೆಗೆ ಸಂಬಂಧಿಸಿದಂತೆ ಆಸ್ತಿ ತೆರಿಗೆ ಘೋಷಣೆ ಮಾಡಿದ ನಾಲ್ಕು ದಾಖಲಾತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-3 ರಿಂದ 6 ಎಂದು, ಆಸ್ತಿ ತೆರಿಗೆ ಪಾವತಿ ಮಾಡಿದ ಬಾಬ್ತು ನಾಲ್ಕು ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-7 ರಿಂದ 10 ಎಂದು,ದಿನಾಂಕ 01.03.2021 ರಂದು ಪುರಸಭೆ ಭಟ್ಕಳದ ಮುಖ್ಯಾಧಿಕಾರಿಯವರಿಗೆ ನೀಡಿದ ತಕರಾರು ಅರ್ಜಿಯ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು, ದಿನಾಂಕ 16.07.2021 ರಂದು ಪುರಸಭೆ ಭಟ್ಕಳದ ಮುಖ್ಯಾಧಿಕಾರಿಯವರಿಗೆ ನೀಡಿದ ತಕರಾರು ಅರ್ಜಿಯ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು, ದಿನಾಂಕ 14.09.2021 ರಂದು ಪುರಸಭೆ ಭಟ್ಕಳದ ಮುಖ್ಯಾಧಿಕಾರಿಯವರಿಗೆ ನೀಡಿದ ತಕರಾರು ಅರ್ಜಿಯ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-13 ಎಂದು, ಹೆಸ್ಕಾಂ ಭಟ್ಕಳರವರಿಗೆ ನೀಡಿದ ಆಕ್ಷೇಪ ಪತ್ರದ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-14 ಎಂದು, ನನ್ನ ತಂದೆಯವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-15 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೇಳಿದ್ದರಿಂದ ಮುಂದೂಡಲಾಯಿತು.**

**(ನನ್ನ ಹೇಳಿಕೆ ಪ್ರಕಾರ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ. ಹೇ.ಕೇ. ಸರಿ ಇದೆ.**

**ಸಹಿ ಇದೆ.**

**ಹೆಚ್ಚುವರಿ ಸಿವಿಲ್ ಜಡ್ಜ್, ಭಟ್ಕಳ.**